**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** M/s Suzlon Gujarat Wind Park Limited ಕಂಪನಿಗೆ ರಾಯಚೂರು, ಬಳ್ಳಾರಿ, ಬಿಜಾಪುರ, ಗುಲ್ಬರ್ಗಾ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಹಂಚಿಕೆಯಾಗಿರುವ 250.2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಅಂಶಿಕ 50.4 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 317.1 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸಿ, ಯೋಜನೆಯ ಅನುಷ್ಠಾನಕ್ಕೆ ಕಾಲಾವಧಿ ವಿಸ್ತರಿಸುವ ಬಗ್ಗೆ.

**ಓದಲಾಗಿದೆ** 1) ಸರ್ಕಾರದ ಆದೇಶ ಸಂಖ್ಯೆ: ಇಎನ್ 204 ಎನ್‌ಸಿಇ 2009, ದಿನಾಂಕ:20.05.2010.
2) ಸರ್ಕಾರದ ಆದೇಶ ಸಂಖ್ಯೆ: ಇಎನ್ 100 ಎನ್‌ಸಿಇ 2011, ದಿನಾಂಕ:06.04.2011.
3) ಸರ್ಕಾರದ ಆದೇಶ ಸಂಖ್ಯೆ: ಇಎನ್ 101 ಎನ್‌ಸಿಇ 2011, ದಿನಾಂಕ:06.04.2011.
4) ಸರ್ಕಾರದ ಆದೇಶ ಸಂಖ್ಯೆ: ಇಎನ್ 102 ಎನ್‌ಸಿಇ 2011, ದಿನಾಂಕ:06.04.2011.
5) ಸರ್ಕಾರದ ಆದೇಶ ಸಂಖ್ಯೆ: ಇಎನ್ 261 ಎನ್‌ಸಿಇ 2016, ದಿನಾಂಕ:24.10.2016.
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ, ಬೆಂಗಳೂರು ಇವರ ಏಕ ಕಡತ ಸಂಖ್ಯೆ: KRED/08/SISL-50.4 MW to 317.10 MW/2016/1301-S.

* * *

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಸರ್ಕಾರದ ಆದೇಶದಲ್ಲಿ, M/s Suzlon Infrastructure Services Limited ಕಂಪನಿಗೆ ರಾಯಚೂರು, ಬಳ್ಳಾರಿ, ಬಿಜಾಪುರ, ಗುಲ್ಬರ್ಗಾ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಒಟ್ಟು 250.2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಿ ಆದೇಶಿಸಲಾಗಿತ್ತು. ತದನಂತರ, ಮೇಲೆ ಓದಲಾದ ಕ್ರಮ ಸಂಖ್ಯೆ (2) (3) ಮತ್ತು (4) ರ ಸರ್ಕಾರದ ಆದೇಶಗಳಲ್ಲಿ ಕ್ರಮವಾಗಿ M/s Suzlon Infrastructure Services Limited ಕಂಪನಿಗೆ ಹಂಚಿಕೆಯಾಗಿದ್ದ 250.2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ ಹಾವೇರಿ ಜಿಲ್ಲೆಯ ಅಗಸನಹಳ್ಳಿ, ನಂದಿಹಳ್ಳಿ ಮತ್ತು ಬೈದಗಿ ಗ್ರಾಮಗಳಲ್ಲಿ ಮಂಜೂರಾಗಿದ್ದ ಅಂಶಿಕ 3 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 16.8 ಮೆ.ವ್ಯಾ. ಸಾಮರ್ಥ್ಯಕ್ಕೆ, ಕೊಪ್ಪಳ ಜಿಲ್ಲೆಯ ಕುಷ್ಟಗಿ ತಾಲ್ಲೂಕಿನ ಹಿರೇಮನ್ನಪುರ ಗ್ರಾಮದಲ್ಲಿ ಮಂಜೂರಾಗಿದ್ದ 4.2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 37.8 ಮೆ.ವ್ಯಾ. ಸಾಮರ್ಥ್ಯಕ್ಕೆ ಮತ್ತು ರಾಯಚೂರು ಜಿಲ್ಲೆಯ ನಿಶ್ಚಿಗುಡ್ಡ ಗ್ರಾಮದಲ್ಲಿ ಮಂಜೂರಾಗಿದ್ದ 4.2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 19.5 ಮೆ.ವ್ಯಾ ಸಾಮರ್ಥ್ಯಕ್ಕೆ ಹೆಚ್ಚಿಸಿ ಆದೇಶಿಸಲಾಗಿತ್ತು. ಇದರಂತೆ, M/s Suzlon Infrastructure Services Limited ಕಂಪನಿಗೆ ಒಟ್ಟು 312.9 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಹಂಚಿಕೆ ಮಾಡಲಾಗಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಸರ್ಕಾರದ ಆದೇಶದಲ್ಲಿ, M/s Suzlon Infrastructure Services Limited ಕಂಪನಿಗೆ ರಾಯಚೂರು, ಬಳ್ಳಾರಿ, ಬಿಜಾಪುರ, ಗುಲ್ಬರ್ಗಾ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಹಂಚಿಕೆಯಾಗಿರುವ 312.9 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗಳನ್ನು M/s Suzlon Gujarat Wind Park Limited ಕಂಪನಿಗೆ ವರ್ಗಾಯಿಸಿ ಆದೇಶಿಸಲಾಗಿತ್ತು.

---2)

ಮೇಲೆ ಓದಲಾದ ಕ್ರಮ ಸಂಖ್ಯೆ (6) ರನ್ವಯ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ ಇವರು ಏಕ ಕಡತ ಪದ್ಧತಿಯಡಿ ಸಲ್ಲಿಸಿರುವ ಪ್ರಸ್ತಾವನೆಯಲ್ಲಿ M/s Suzlon Gujarat Wind Park Limited ಕಂಪನಿಗೆ ಮೂಲ ಆದೇಶದಲ್ಲಿ ರಾಯಚೂರು, ಬಳ್ಳಾರಿ, ಬಿಜಾಪುರ, ಗುಲ್ಬರ್ಗಾ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಹಂಚಿಕೆಯಾಗಿರುವ 250.2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಆದೇಶದ ಕ್ರಮ ಸಂಖ್ಯೆ 6 ರ ಅಂಶಿಕ 50.4 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 317.1 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವಂತೆ ಕೋರಿ ಅಭಿವೃದ್ಧಿದಾರರು ವಿಸ್ತೃತ ಯೋಜನಾ ವರದಿಯನ್ನು ಸಲ್ಲಿಸಿರುತ್ತಾರೆ ಮತ್ತು ನಿಯಮಾನುಸಾರ ಶುಲ್ಕಗಳನ್ನು ಪಾವತಿಸಿರುತ್ತಾರೆ ಹಾಗೂ 50.4 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಅನುಷ್ಠಾನದ ಅವಧಿಯನ್ನು ದಿನಾಂಕ: 19.05.2016 ರಿಂದ 18.05.2018 ರವರೆಗೆ ವಿಸ್ತರಿಸಲು ಕಾಲಾವಧಿ ವಿಸ್ತರಣಾ ಶುಲ್ಕವನ್ನು ಪಾವತಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ, ಸದರಿ ಯೋಜನೆಗೆ ಸಂಬಂಧಿಸಿದ ತಾಂತ್ರಿಕ ವಿವರಗಳು, ಸ್ಥಳದ ಮಾಹಿತಿ, ಅಕ್ಷಾಂಶ ಮತ್ತು ರೇಖಾಂಶ ಇನ್ನಿತರೆ ವಿವರಗಳೊಂದಿಗೆ, M/s Suzlon Gujarat Wind Park Limited ಕಂಪನಿಗೆ ರಾಯಚೂರು, ಬಳ್ಳಾರಿ, ಬಿಜಾಪುರ, ಗುಲ್ಬರ್ಗಾ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಹಂಚಿಕೆಯಾಗಿರುವ 250.2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯಲ್ಲಿ ಕ್ರಮ ಸಂಖ್ಯೆ 6 ರ ಅಂಶಿಕ 50.4 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 317.1 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸುವಂತೆ ಮತ್ತು ಸದರಿ ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಅನುಷ್ಠಾನದ ಅವಧಿಯನ್ನು ದಿನಾಂಕ: 19.05.2016 ರಿಂದ 18.05.2018 ರವರೆಗೆ ವಿಸ್ತರಿಸಬಹುದೆಂದು ಶಿಫಾರಸ್ಸಿನೊಂದಿಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ಮೇಲಿನ ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಇಎನ್ 261 ಎನ್‌ಸಿಇ 2016, ಬೆಂಗಳೂರು, ದಿನಾಂಕ: 25.10.2016.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಇಎನ್ 204 ಎನ್‌ಸಿಇ 2009, ದಿನಾಂಕ: 20.05.2010 ರನ್ವಯ M/s Suzlon Gujarat Wind Park Limited ಕಂಪನಿಗೆ ರಾಯಚೂರು, ಬಳ್ಳಾರಿ, ಬಿಜಾಪುರ, ಗುಲ್ಬರ್ಗಾ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಹಂಚಿಕೆಯಾಗಿರುವ 250.2 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯ ಕ್ರಮ ಸಂಖ್ಯೆ 6 ರ ಅಂಶಿಕ 50.4 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು ಶೆಡ್ಯೂಲ್‌ನಲ್ಲಿ ವಿವರಿಸಿರುವಂತೆ ಹಾಗೂ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳಿಗೊಳಪಟ್ಟು 317.1 ಮೆ.ವ್ಯಾ. ಸಾಮರ್ಥ್ಯಕ್ಕೆ ಹೆಚ್ಚಿಸಿ ಮತ್ತು ಯೋಜನೆಯ ಅನುಷ್ಠಾನಕ್ಕೆ ದಿನಾಂಕ :19.05.2016 ರಿಂದ 18.05.2018 ರವರೆಗೆ ಕಾಲಾವಧಿ ವಿಸ್ತರಿಸಿ ಆದೇಶಿಸಲಾಗಿದೆ.

**Geographical area description for 317.10 MW capacity Wind Power Project**
**M/s Suzlon Gujarat Wind Park Limited**

| Sl. No. | Geographical area description of the project | Near by villages of the proposed area and district. | Sanctionedcapacity in MW | Enhamcemetn proposed in MW | Tota capacity in MW |
|---|---|---|---|---|---|
| 1 | The identified are is spread across 2 topo sheets (57A/1 and 57A/5) the area appears to be general plain with higher elevation and some areas are having rocks and boulders and would be having multiple ownership. Further, it has number of villages & peaks and is covered in the following geographical co-ordinates as:<br>**Latitude**:15°45'0"- 16°0'0"N<br>**Longitude**:75°0'0"- 76°20'28"E<br>**Peaks**: 648, 651, 657, 653, 665, 653, 699, 683, 660, 636, 652, 651, 640, 653, 644, 646, 557, 596, 603, 610, 653, 649, 636, 651, 631, 625, 609, 597, 613, 619 m Amsl | Yergeri, Kalalbandi, Chalageri, Talageri, Kushtagi, Datihal, Ilkal, Alelmpurpet, Hire Singangutti, Chik Otgeri, Gumgeri, Gonal, Hire Mannapur Kandgal, Raichur, Koppal and Bagalkot district. | 50.4 MW | 266.7 | 317.1 (151 Nos x 2100 KW) |

---3)

**ಷರತ್ತುಗಳು**

1 ಅಭಿವೃದ್ಧಿದಾರರು ಸರ್ಕಾರದ ಆದೇಶ ಸಂಖ್ಯೆ :ಇಎನ್ 435 ಎನ್‌ಸಿಇ 2011, ದಿನಾಂಕ 06.1.2012 ರನ್ವಯ 45 ದಿನಗಳ ಒಳಗಾಗಿ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತದೊಂದಿಗೆ ನಿಯಮಾನುಸಾರ ಒಡಂಬಡಿಕೆ ಮಾಡಿಕೊಳ್ಳತಕ್ಕದ್ದು.

2 ಅಭಿವೃದ್ಧಿದಾರರು ಮೂಲ ಆದೇಶದಲ್ಲಿ ಹಂಚಿಕೆಯಾಗಿದ್ದ 50.4 ಮೆ.ವ್ಯಾ. ಸಾಮರ್ಥ್ಯದ ಯೋಜನಾ ಪ್ರದೇಶದಲ್ಲಿಯೇ, ಅಂದರೆ, ಅದೇ ಭೌಗೋಳಿಕ ಪ್ರದೇಶದಲ್ಲಿಯೇ ಹೆಚ್ಚಳಗೊಂಡಿರುವ ಸಾಮರ್ಥ್ಯವನ್ನು ಸಹ ಅನುಷ್ಠಾನಗೊಳಿಸತಕ್ಕದ್ದು.

3 ಅಭಿವೃದ್ಧಿದಾರರು ಮೂಲ ಆದೇಶದಲ್ಲಿ ಹಂಚಿಕೆಯಾಗಿರುವ 50.4 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಗೆ ನಿಯಮಾನುಸಾರ ಕಾಲಾವಧಿ ವಿಸ್ತರಣಾ ಶುಲ್ಕವನ್ನು ಪಾವತಿಸುವ ಷರತ್ತಿನೊಂದಿಗೆ ದಿನಾಂಕ :19.05.2016 ರಿಂದ 18.05.2018 ರವರೆಗೆ ಕಾಲಾವಧಿ ವಿಸ್ತರಿಸಲಾಗಿದೆ ಹಾಗೂ ಹೆಚ್ಚಳಗೊಂಡ 266.7 ಮೆ.ವ್ಯಾ. ಸಾಮರ್ಥ್ಯದ ಪವನ ವಿದ್ಯುತ್ ಯೋಜನೆಯನ್ನು 3 ವರ್ಷಗಳ ಅವಧಿಯೊಳಗೆ ಅನುಷ್ಠಾನಗೊಳಿತಕ್ಕದ್ದು. ತದನಂತರವು, ಅನುಷ್ಠಾನಗೊಳ್ಳದ ಸಾಮರ್ಥ್ಯಕ್ಕೆ ನಿಯಮಾನುಸಾರ ಕಾಲಾವಧಿ ವಿಸ್ತರಣಾ ಶುಲ್ಕವನ್ನು ಪಾವತಿಸುವ ಷರತ್ತು ವಿಧಿಸಲಾಗಿದೆ.

4 ಅಭಿವೃದ್ಧಿದಾರರು ಸಾಮರ್ಥ್ಯ ಹೆಚ್ಚಳಗೊಂಡ ಯೋಜನೆಗೂ ಸಹ ವಿದ್ಯುತ್ತನ್ನು ಮಾರಾಟ ಮಾಡುವ ಕುರಿತು ಸಂಬಂಧಪಟ್ಟ ವಿದ್ಯುತ್ ಸರಬರಾಜು ಕಂಪನಿಗಳೊಂದಿಗೆಯೇ ನಿಯಮಾನುಸಾರ ವಿದ್ಯುತ್ ಖರೀದಿ ಒಡಂಬಡಿಕೆ / ಕೆಪಿಟಿಸಿಎಲ್‌ನೊಂದಿಗೆ ವೀಲಿಂಗ್ ಅಂಡ್ ಬ್ಯಾಂಕಿಂಗ್ ಒಡಂಬಡಿಕೆ ಮಾಡಿಕೊಳ್ಳಲು ಅನುಮತಿಸಿದೆ.

5 ಅಭಿವೃದ್ಧಿದಾರರು ಸರ್ಕಾರದ ಮೂಲ ಹಂಚಿಕೆ ಆದೇಶ ಸಂಖ್ಯೆ :ಇಎನ್ 204 ಎನ್‌ಸಿಇ 2009, ದಿನಾಂಕ:20.05.2010 ರಲ್ಲಿ ಹಂಚಿಕೆಯಾದ 250.2 ಮೆ.ವ್ಯಾ. ಸಾಮರ್ಥ್ಯದಲ್ಲಿ ಅನುಷ್ಠಾನಗೊಳ್ಳದೆ ಬಾಕಿ ಇರುವ ಸಾಮರ್ಥ್ಯಕ್ಕೂ ಸಹ ಕಾಲಾವಧಿ ವಿಸ್ತರಣಾ ಶುಲ್ಕವನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು ಹಾಗೂ ಕೆ.ಆರ್.ಇ.ಡಿ.ಎಲ್. ಸಂಸ್ಥೆಯು ಕಾಲಾವಧಿ ವಿಸ್ತರಣೆಗೆ ಸೂಕ್ತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿ, ಸರ್ಕಾರದ ಅನುಮೋದನೆಯ ನಂತರ ಒಡಂಬಡಿಕೆ ಮಾಡಿಕೊಳ್ಳುವುದು.

6 ಅಭಿವೃದ್ಧಿದಾರರು ಸರ್ಕಾರದ ಆದೇಶ ಸಂಖ್ಯೆ :ಇಎನ್ 100 ಎನ್‌ಸಿಇ 2011 ದಿನಾಂಕ:06.04.2011, ಇಎನ್ 101 ಎನ್‌ಸಿಇ 2011 ದಿನಾಂಕ:06.04.2011 ಮತ್ತು ಇಎನ್ 102 ಎನ್‌ಸಿಇ 2011 ದಿನಾಂಕ:06.04.2011 ಗಳಲ್ಲಿ ಸಾಮರ್ಥ್ಯ ಹೆಚ್ಚಳಗೊಂಡು ಹಂಚಿಕೆಯಾಗಿರುವ ಪವನ ವಿದ್ಯುತ್ ಯೋಜನೆಗಳ ಅನುಷ್ಠಾನದ ಅವಧಿಯು ಸಹ ದಿನಾಂಕ:19.05.2016 ಕ್ಕೆ ಮುಕ್ತಾಯವಾಗಿದ್ದು, ಸದರಿ ಯೋಜನೆಯಲ್ಲಿ ಅನುಷ್ಠಾನಗೊಳ್ಳದೆ ಬಾಕಿ ಇರುವ ಸಾಮರ್ಥ್ಯಕ್ಕೂ ಸಹ ಕಾಲಾವಧಿ ವಿಸ್ತರಣಾ ಶುಲ್ಕವನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕೆ.ಆರ್.ಇ.ಡಿ.ಎಲ್.ಗೆ ಪಾವತಿಸತಕ್ಕದ್ದು ಹಾಗೂ ಕೆ.ಆರ್.ಇ.ಡಿ.ಎಲ್. ಸಂಸ್ಥೆಯು ಕಾಲಾವಧಿ ವಿಸ್ತರಣೆಗೆ ಸೂಕ್ತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿ, ಸರ್ಕಾರದ ಅನುಮೋದನೆಯ ನಂತರ ಒಡಂಬಡಿಕೆ ಮಾಡಿಕೊಳ್ಳುವುದು.

7 ಸದರಿ ಕಂಪನಿಯವರು ಯೋಜನೆಗೆ ಸಂಬಂಧಿಸಿದಂತೆ ಬಾಕಿ ಇರುವ ಡಿಪಿಆರ್ ಮೊತ್ತ ಹಾಗೂ ಇನ್ನಿತರೆ ಯಾವುದೇ ರೀತಿಯ ಶುಲ್ಕಗಳನ್ನು ಒಡಂಬಡಿಕೆ ಮಾಡಿಕೊಳ್ಳುವ ಮುನ್ನ ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತಕ್ಕೆ ಸಂದಾಯ ಮಾಡತಕ್ಕದ್ದು.

8 ಕರ್ನಾಟಕ ಭೂಸುಧಾರಣ ಕಾಯ್ದೆ 1961 ಕಲಂ 109 ರಡಿ ಕಂದಾಯ ಇಲಾಖೆಯಿಂದ ಅನುಮತಿ ಪಡೆದುಕೊಂಡು ಭೂಪರಿವರ್ತನೆಯಾದ ನಂತರವೇ ಕೃಷಿ ಜಮೀನನ್ನು ಕೃಷಿಯೇತರ ಉದ್ದೇಶಕ್ಕಾಗಿ ಬಳಕೆ ಮಾಡಿಕೊಳ್ಳತಕ್ಕದ್ದು.

9 ಈ ಯೋಜನೆಗೆ ಸರ್ಕಾರದ ಕೈಗಾರಿಕ ನೀತಿ 2014-19 ರನ್ವಯ ಅನ್ವಯಿಸುವ ಸವಲತ್ತುಗಳು ಅನ್ವಯವಾಗುತ್ತವೆ.

10 ಈ ಆದೇಶವನ್ನು ರದ್ದು ಪಡಿಸುವ/ಮಾರ್ಪಾಡು ಮಾಡುವ ಅಧಿಕಾರವನ್ನು ಸರ್ಕಾರವು ಹೊಂದಿರುತ್ತದೆ.

—4)

ಉಳಿದಂತೆ ಸರ್ಕಾರದ ಮೂಲ ಹಂಚಿಕೆ ಆದೇಶ ಸಂಖ್ಯೆ: ಇಎನ್ 204 ಎನ್‌ಸಿಇ 2011, ದಿನಾಂಕ: 20.05.2010, ಇಎನ್ 100 ಎನ್‌ಸಿಇ 2011, ದಿನಾಂಕ: 06.04.2011, ಇಎನ್ 101 ಎನ್‌ಸಿಇ 2011 ದಿನಾಂಕ: 06.04.2011 ಮತ್ತು ಇಎನ್ 102 ಎನ್‌ಸಿಇ 2011, ದಿನಾಂಕ: 06.04.2011 ರಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಮತ್ತು ನಿಬಂಧನೆಗಳು ಯಥಾವತ್ತಾಗಿ ಮುಂದುವರಿಯುತ್ತವೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎ.ಎ.ಚಪ್ಪರಬಂದ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಇಂಧನ ಇಲಾಖೆ.

**ಇವರಿಗೆ:**

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ವಿಕಾಸ ಸೌಧ, ಬೆಂಗಳೂರು, ಇವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಣೆಗಾಗಿ.

**ಪ್ರತಿ:**

1 ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು 560001.

2 ಪ್ರಧಾನ ಮಹಾಲೇಖಪಾಲರು (ಇ & ಎಸ್ ಎಸ್ ಎ) ರವರ ಕಾರ್ಯದರ್ಶಿ, ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ", ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು – 560001

3 ಪ್ರಧಾನ ಮಹಾಲೇಖಪಾಲರು (ಎ & ಇ) ರವರ ಕಾರ್ಯದರ್ಶಿ, ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು – 560001.

4 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿ, ಅರಣ್ಯ ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ / ಕಂದಾಯ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

5 ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯಪಡೆ ಮುಖ್ಯಸ್ಥರು), ಅರಣ್ಯ ಭವನ, 18ನೇ ಕ್ರಾಸ್, ಮಲ್ಲೇಶ್ವರ, ಬೆಂಗಳೂರು.

6 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಕಾವೇರಿ ಭವನ ಬೆಂಗಳೂರು-9.

7 ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಯಮಿತ,ಬೆಂಗಳೂರು-1.

8 ವ್ಯವಸ್ಥಾಪಕ ನಿರ್ದೇಶಕರು, ಹೆಸ್ಕಾಂ, ಜೆಸ್ಕಾಂ, ಮೆಸ್ಕಾಂ. ಬೆಸ್ಕಾಂ, ಸೆಸ್ಕ್

9 ಜಿಲ್ಲಾಧಿಕಾರಿ, ರಾಯಚೂರು, ಬಳ್ಳಾರಿ, ಬಿಜಾಪುರ, ಗುಲ್ಬರ್ಗಾ ಮತ್ತು ಹಾವೇರಿ ಜಿಲ್ಲೆಗಳು.

10 ಉಪ ಅರಣ್ಯ ಸಂರಕ್ಷಣಾಧಿಕಾರಿ, ರಾಯಚೂರು, ಬಳ್ಳಾರಿ, ಬಿಜಾಪುರ, ಗುಲ್ಬರ್ಗಾ ಮತ್ತು ಹಾವೇರಿ ಪ್ರಾದೇಶಿಕ ವಿಭಾಗ.

11 ಮಾನ್ಯ ಇಂಧನ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.

12 M/s Suzlon Gujarat Wind Park Limited (Formerly M/s Suzlon Infrastructure Services Limited) 100/2, Anchorage 2, 3rd Floor, Richmond Road, Bangalore.

13 ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಇಂಧನ ಇಲಾಖೆ.

14 ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಇಂಧನ ಇಲಾಖೆ.

15 ಶಾಖಾ ರಕ್ಷಾ ಕಡತ / ಕಚೇರಿ ಪ್ರತಿ / ಹೆಚ್ಚುವರಿ ಪ್ರತಿಗಳು.